<u>ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ</u>

<u>ಸಿಸಿ ನಂ.**145/2020**</u>

**<u>ಚಾಸಾ-2/ಪಿಡಬ್ಲೂ-1</u>**

| | |
|---|---|
| **ಹೆಸರು** | ಸಂಗನಗೌಡ |
| **ತಂದೆ ಹೆಸರು** | ಸೋಮರಾಯಗೌಡ |
| **ವಯಸ್ಸು** | 58 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಕಡಕೋಳ |

<u>ದಿನಾಂಕ **03-10-2022** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದ:</u>**

ಚಾಸಾ-3 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಡ್ರಾಮಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದರೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದ.</u>**

ದಿನಾಂಕ 02-08-2019 ರಂದು ಸಾಯಂಕಾಲ 04-30 ರಿಂದ 05-30 ಗಂಟೆವರೆಗೆ ಕೋಣಶಿರಸಗಿ ಗ್ರಾಮದ ಅಂಬಿಗರ ಚೌಡಯ್ಯ ವೃತದ ಹತ್ತಿರ ಆರೋಪಿತನು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾಗ ಪೊಲೀಸರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ದಾಳಿ ಮಾಡಿ ಮದ್ಯವನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ

## ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ

### ಸಿಸಿ ನಂ.**145/2020**

**ಚಾಸಾ-3/ಪಿಡಬ್ಲ್ಯೂ-2**

| | |
|---|---|
| **ಹೆಸರು** | ಬಸಲಿಂಗಪ್ಪ |
| **ತಂದೆ ಹೆಸರು** | ಭಗವಂತ್ರಾಯ |
| **ವಯಸ್ಸು** | 50 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಕಡಕೋಳ |

ದಿನಾಂಕ **03-10-2022** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ಚಾಸಾ-2 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 3-4 ವರ್ಷಗಳ ಹಿಂದೆ ಯಡ್ರಾಮಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದರೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದ.**

ದಿನಾಂಕ 02-08-2019 ರಂದು ಸಾಯಂಕಾಲ 04-30 ರಿಂದ 05-30 ಗಂಟೆವರೆಗೆ ಕೋಣಶಿರಸಗಿ ಗ್ರಾಮದ ಅಂಬಿಗರ ಚೌಡಯ್ಯ ವೃತ್ತದ ಹತ್ತಿರ ಆರೋಪಿತನು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾಗ ಪೊಲೀಸರು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ದಾಳಿ ಮಾಡಿ ಮದ್ಯವನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ